## ಚುಟುಕು ಸುದ್ದಿ

### ಕಾರ್ಯಾಗಾರಕ್ಕೆ ತೆರಳುವ ಯುವ ಪಡೆಗೆ ಬೀಳ್ಕೊಡುಗೆ

**ಉದಯಕಾಲ ನ್ಯೂಸ್, ದೇವನಹಳ್ಳಿ:** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶ್ರೀರಂಗಪಟ್ಟಣದ ಬಳಿ ನಡೆಯುತ್ತಿರುವ ಯುವ ಕಾರ್ಯಾಗಾರಕ್ಕೆ ತೆರಳಲಿರುವ ದೇವನಹಳ್ಳಿ ವಿಧಾನ ಸಭಾ ಕ್ಷೇತ್ರದ ಯುವ ಜೆಡಿಎಸ್ ಕಾರ್ಯಕರ್ತರಿಗೆ ಶಾಸಕರಾದ ನಿಸರ್ಗ ನಾರಾಯಣಸ್ವಾಮಿ ಅವರು ಬೀಳ್ಕೊಡುಗೆ ನೀಡಿದರು. ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ಮಾತನಾಡಿ, ಯುವಕರು ದೇಶದ ಭವಿಷ್ಯ. ಇಂತಹ ಕಾರ್ಯಾಗಾರಗಳಲ್ಲಿ ಭಾಗವಹಿಸುವುದರಿಂದ ಯುವಕರಿಗೆ ನಾಯಕತ್ವ ಗುಣಗಳು ಬೆಳೆಯುತ್ತವೆ. ಸಮಾಜದ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಪರಿಹಾರ ಕಂಡುಕೊಳ್ಳುವ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕೆಂದರು.

ಯುವ ಘಟಕದ ತಾಲೂಕು ಅಧ್ಯಕ್ಷ ಹೊಸಹಳ್ಳಿ ಟಿ.ರವಿ ಮಾತನಾಡಿ, ಈ ಕಾರ್ಯಾಗಾರದಲ್ಲಿ ಯುವಕರಿಗೆ ವ್ಯಕ್ತಿತ್ವ ವಿಕಸನ, ನಾಯಕತ್ವ ಗುಣಗಳು, ಸಾಮಾಜಿಕ ಜವಾಬ್ದಾರಿಗಳ ಬಗ್ಗೆ ತರಬೇತಿ ನೀಡಲಾಗುತ್ತದೆ. ಕಾರ್ಯಾಗಾರದಲ್ಲಿ ಭಾಗವಹಿಸುವುದರಿಂದ ಯುವಕರಿಗೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ. ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಎಂ. ಕುಮಾರಸ್ವಾಮಿ, ಮಾಜಿ ಹಾಲಿ ಶಾಸಕರು, ವಿಶೇಷವಾಗಿ ಬಿ. ಎನ್ದು ಜಗದೀಶ್ ಕಾರ್ಯಾಗಾರ ನಡೆಸಿ ಕೊಡಲಿದ್ದಾರೆ ಎಂದು ತಿಳಿಸಿದರು. ಯುವ ಘಟಕದ ಪದಾಧಿಕಾರಿಗಳು ಮತ್ತು ಸದಸ್ಯರು ಭಾಗವಹಿಸಿದ್ದರು.

### ಟೈಲರಿಂಗ್ ತರಬೇತಿ ಸಮಾರೋಪ

**ಉದಯಕಾಲ ನ್ಯೂಸ್, ಹಾರೋಹಳ್ಳಿ:** ಟೈಲರಿಂಗ್ ಉದ್ಯಮ ಇಂದು ಬಹಳ ಮುಂದುವರೆದ ಅದ್ಭುತ ಕೌಶಲ್ಯಗಳಲ್ಲಿ ಒಂದಾಗಿದೆ. ಇದರಿಂದ ಅನೇಕ ಜನರು ಉತ್ತಮ ಆದಾಯವನ್ನು ಗಳಿಸಿ ಆರ್ಥಿಕ ಸಬಲರಾಗಿ ಜೀವನ ನಡೆಸುತ್ತಿದ್ದಾರೆ. ಇದರಿಂದ ಮಹಿಳೆಯರು ಖರ್ಚು ವೆಚ್ಚಗಳನ್ನು ಭರಿಸುವ ಶಕ್ತಿ ಹೊಂದಿದಂತಾಗುತ್ತದೆ ಎಂದು ಜಿಲ್ಲಾ ನಿರ್ದೇಶಕರ ಜಯಕರಶೆಟ್ಟಿ ತಿಳಿಸಿದರು.

ತಾಲೂಕಿನ ಕಗ್ಗಲೀಪುರ ವಲಯದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮದಡಿಯಲ್ಲಿ ನಡೆದ ಮೂರು ತಿಂಗಳು ಉಚಿತ ಟೈಲರಿಂಗ್ ತರಬೇತಿಯ ಸಮಾರೋಪ ಸಮಾರಂಭವನ್ನು ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡಿ, ಸ್ವ ಸಹಾಯ ಸಂಘಗಳ ಬಲವರ್ಧನೆ ಶಿಸ್ತುಬದ್ಧ ವ್ಯವಹಾರ ವ್ಯವಸ್ಥೆಯನ್ನು ಉಳಿಸಿಕೊಂಡು ಹೊಗುವ ಬಗ್ಗೆ ಮಾಹಿತಿ ನೀಡಿದರು. ತರಬೇತಿಯಲ್ಲಿ ಭಾಗವಹಿಸಿದ್ದ 40 ಮಂದಿ ಫಲಾನುಭವಿಗಳಿಗೆ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಯೋಜನಾಧಿಕಾರಿ ಹಾಗೂ ಟೈಲರಿಂಗ್ ಶಿಕ್ಷಕಿ ಸುಗುಣ, ಒಕ್ಕೂಟದ ಅಧ್ಯಕ್ಷೆ ಮಂಜುಳಾ ಸೇರಿದಂತೆ ವಲಯ ಮೇಲ್ವಿಚಾರಕರು, ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಮಾನಸಿಕ ಸಮಸ್ಯೆಗಳಿಗೆ ಸಹಾಯವಾಣಿಗೆ ಸಂಪರ್ಕಿಸಿ

## ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಕುಮಾರ್ ಹೇಳಿಕೆ

**ಉದಯಕಾಲ ನ್ಯೂಸ್, ರಾಮನಗರ:** ಮಾನಸಿಕ ಸಮಸ್ಯೆಗಳಿಗೆ ಹಾಗೂ ಶಾಲೆ-ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳು ಪರೀಕ್ಷೆಗೆ ಸಂಬಂಧಿಸಿದ ಒತ್ತಡಗಳಿದ್ದರೆ ಶುಲ್ಕರಹಿತ ದೂರವಾಣಿ ಸಂಖ್ಯೆ 14416 ಟೆಲಿ ಮನಸ್‌ಗೆ ಕರೆ ಮಾಡಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು. ವೈದ್ಯರು ಅವರ ಗೌಪ್ಯತೆಯನ್ನು ಕಾಪಾಡಿ ಅವರಿಗೆ ಪರಿಹಾರ ಸೂಚಿಸುತ್ತಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ಕುಮಾರ್ ತಿಳಿಸಿದರು.

ಮಂಗಳವಾರ ನಗರದ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಎನ್.ಎಚ್.ಎಂ./ಐ.ಇ.ಸಿ/ಎಸ್.ಬಿ.ಸಿ.ಸಿ. ಕಾರ್ಯಕ್ರಮದಡಿ ಪತ್ರಕರ್ತರಿಗಾಗಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಯೋಜನೆ-ಸೇವೆಗಳ ಬಗ್ಗೆ ಮಾತನಾಡಿದರು.

ದಾನಗಳಲ್ಲೇ ಶ್ರೇಷ್ಠವಾದದ್ದು ನೇತ್ರದಾನ. ಒಬ್ಬ ವ್ಯಕ್ತಿ ಕಣ್ಣುಗಳನ್ನು ದಾನ ಮಾಡಿದರೆ ಅಂಧರಿಗೆ ಬೆಳಕು ನೀಡಿದ ಪುಣ್ಯ ಲಭಿಸುತ್ತದೆ. ವ್ಯಕ್ತಿ ಮರಣ ಹೊಂದಿದ 6 ಗಂಟೆಯೊಳಗೆ ನೇತ್ರದಾನ ಮಾಡಬಹುದು ಎಂದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಪದ್ಮಾವತಿ ಮಾತನಾಡಿ, ಜಿಲ್ಲೆಯಲ್ಲಿ ಮಲೇರಿಯಾ ನಿರ್ಮೂಲನೆ ಹಂತದಲ್ಲಿದ್ದೇವೆ. ಬೇಸಿಗೆ ಕಾಲದಲ್ಲಿ ಡಿಹೈಡ್ರೇಷನ್‌ನಿಂದಾಗಿ ನೀರಿನ ಅಂಶ ನಮ್ಮ ದೇಹದಿಂದ ಹೊರಹೋಗುತ್ತದೆ. ಹಾಗಾಗಿ ಜನರು ಮಧ್ಯಾಹ್ನ 12 ರಿಂದ 3 ಗಂಟೆಯ ಅವಧಿಯೊಳಗೆ ಆದಷ್ಟು ಬಿಸಿಲಿನಲ್ಲಿ ಇರುವುದನ್ನು ಕಡಿಮೆ ಮಾಡಬೇಕು. ಆದಷ್ಟು ಅರ್ಧ ಗಂಟೆಗೊಮ್ಮೆ ಒಂದು ಲೋಟ ನೀರು ಕುಡಿಯುವುದನ್ನು ರೂಢಿಸಿಕೊಳ್ಳಬೇಕು. ಹಣ್ಣುಗಳು ತಿನ್ನಬೇಕು, ಎಳನೀರನ್ನು ಕುಡಿಯಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಶಶಿ ಕಿರಣ್ ಮಾತನಾಡಿ, ಕ್ಷಯರೋಗ ಎಂದು ಯಾರು ಅನ್ಯತಾ ಭಾವಿಸಬಾರದು. ಕ್ಷಯರೋಗ ಬಂದಿದೆ ಎಂದರೆ ಜನರು ನಮ್ಮನ್ನು ಕಡೆಗಣಿಸುತ್ತಾರೆ ಎಂದು ಭಯ ಪಡುವ ಅಗತ್ಯವಿಲ್ಲ. ಕ್ಷಯ ರೋಗಕ್ಕೆ ಒಳಗಾದವರಿಗೆ 10 ರಿಂದ 12 ಲಕ್ಷಣಗಳು ಕಾಣಿಸಿಕೊಂಡರೆ ಕ್ಷಯ ಎಂದು ಕರೆಯುತ್ತೇವೆ. ಮೊದಲಿಗೆ ಸತತವಾದ ಕೆಮ್ಮು, ಕಫ, ಸಂಜೆಯ ವೇಳೆ ಮೈ ಬಿಸಿ ಎನ್ನುವಷ್ಟು ಜ್ವರ, ಆಹಾರ ಸೇವನೆ ಮಾಡದ ಲಕ್ಷಣಗಳು ಕಂಡು ಬಂದರೆ ಶೇ.99ರಷ್ಟು ಅವರಿಗೆ ಕ್ಷಯ ರೋಗ ಬಂದಿದೆ ಎಂದು ಖಚಿತವಾಗುತ್ತದೆ. ಇಂತಹವರನ್ನು ಗುರುತಿಸಿ, ಪರೀಕ್ಷೆ ಮಾಡಿ ಚಿಕಿತ್ಸೆ ಮೂಲಕ ಗುಣಮುಖರನ್ನಾಗಿ ಮಾಡಲಾಗುವುದು ಎಂದರು.

ನಗರದಲ್ಲಿರುವ ಜಿಲ್ಲಾಸ್ಪತ್ರೆಯಲ್ಲಿ ಕ್ಷಯರೋಗ ಪರೀಕ್ಷೆಗಳನ್ನು ಉಚಿತವಾಗಿ ಮಾಡಲಾಗುತ್ತದೆ. ವೈದ್ಯರು ನೀಡುವ ಔಷಧಿಗಳನ್ನು ನಿರ್ಲಕ್ಷ್ಯ ತೋರದೆ ತೆಗೆದುಕೊಳ್ಳಬೇಕು. ಭಾರತವನ್ನು 2025ಕ್ಕೆ ಟಿ.ಬಿ ಕಾಯಿಲೆ ಮುಕ್ತ ದೇಶವನ್ನಾಗಿಸಬೇಕು. ಟಿ.ಬಿ ಕಾಯಿಲೆ ಇರುವವರಿಗೆ ರಾಜ್ಯ ಸರ್ಕಾರ ನಿಕ್ಷಯ ಪೋಷಣ ಯೋಜನೆಯಡಿ ಒಂದು ಸಾವಿರ ರೂ.ಗಳನ್ನು ನೀಡುತ್ತದೆ. ಅದರಿಂದಾಗಿ ಟಿ.ಬಿಯಿಂದ ಬಳಲುತ್ತಿರುವವರು ಪೋಷಕಾಂಶವುಳ್ಳ ಆಹಾರವನ್ನು ಸೇವಿಸಬೇಕು ಎಂದು ಹೇಳಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಮಂಜುನಾಥ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅರ್ಚಿತಾ, ಜಿಲ್ಲಾ ಆರೋಗ್ಯ ಮೇಲ್ವಿಚಾರಕ ರಾಜೇಂದ್ರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸಂಬಳ ನೀಡದೇ ಗುತ್ತಿಗೆ ಕಾರ್ಮಿಕರ ಬದುಕಿನಲ್ಲಿ ಚೆಲ್ಲಾಟ

**ಉದಯಕಾಲ ನ್ಯೂಸ್, ಹೊಸಕೋಟೆ:** ತಾಲೂಕಿನ ಕಂಬಳೀಪುರ ಗ್ರಾಮದ ಬಳಿ ಇರುವ ಬಿಸಿಡಿ ಅಪಾರ್ಟ್ಮೆಂಟ್‌ನಲ್ಲಿ ಕಾರ್ಮಿಕರನ್ನು ಹೊರಗುತ್ತಿಗೆ ಪಡೆದ ಏನ್ಸ್ಲೀವೇನ್ ಕಂಪನಿ ಮಾಲೀಕರು ಕಾರ್ಮಿಕರಿಗೆ ಪ್ರತಿ ತಿಂಗಳು ಸಮರ್ಪಕವಾಗಿ ಸಂಬಳ ನೀಡುತ್ತಿಲ್ಲ ಎಂದು ಅಪಾರ್ಟ್ಮೆಂಟ್ ಮುಂದೆ ಕಾರ್ಮಿಕರು ಭಾರತೀಯ ಅಂಬೇಡ್ಕರ್ ಸೇನೆ ಅಧ್ಯಕ್ಷ ಶಿವಕುಮಾರ್ ಚಕ್ರವರ್ತಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು.

ಏನ್ಸ್ಲೀವೇನ್ ಕಂಪನಿಯ ಗುತ್ತಿಗೆಯಲ್ಲಿ ಸುಮಾರು 50ಕ್ಕೂ ಹೆಚ್ಚಿನ ಮಹಿಳಾ ಕಾರ್ಮಿಕರು ಬಿಸಿಡಿ ಅಪಾರ್ಟ್ಮೆಂಟ್‌ನಲ್ಲಿ ಹೌಸ್ ಕೀಪಿಂಗ್ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದಾರೆ. ಆದರೆ, ಗುತ್ತಿಗೆ ಪಡೆದ ಕಂಪನಿಯು ಮಹಿಳಾ ಕಾರ್ಮಿಕರಿಗೆ ಸಮರ್ಪಕವಾಗಿ ಸಂಬಳ ನೀಡದೇ ಕಾರ್ಮಿಕರ ಜೀವನದ ಜೊತೆ ಚೆಲ್ಲಾಟ ಆಡುತ್ತಿದ್ದಾರೆ. ಆದ್ದರಿಂದ ಕಾರ್ಮಿಕರು ಭಾರತೀಯ ಅಂಬೇಡ್ಕರ್ ಸೇನೆಯನ್ನು ಸಂಪರ್ಕಿಸಿ ಸಂಘಟನೆ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು.

ಭಾರತೀಯ ಅಂಬೇಡ್ಕರ್ ಸೇನೆ ರಾಜ್ಯಾಧ್ಯಕ್ಷ ಶಿವಕುಮಾರ್ ಚಕ್ರವರ್ತಿ ಮಾತನಾಡಿ, ಬಿಸಿಡಿ ಅಪಾರ್ಟ್ಮೆಂಟ್‌ನಲ್ಲಿ ಗುತ್ತಿಗೆ ಪಡೆದ ಏನ್ಸ್ಲೀವೆನ್ ಕಂಪನಿಯು ಕಾರ್ಮಿಕರಿಗೆ ಪ್ರತಿ ತಿಂಗಳು ಸೂಕ್ತ ಸಮಯಕ್ಕೆ ಸಂಬಳ ನೀಡದೇ ಅವರ ಬದುಕಿನಲ್ಲಿ ಚೆಲ್ಲಾಟವಾಡುತ್ತಿದೆ. ಇಲ್ಲಿನ ಸಂಬಳ ನಂಬಿ ಕಾರ್ಮಿಕರು ಹಲವಾರು ರೀತಿಯ ವ್ಯವಹಾರಗಳನ್ನು ಮಾಡಿಕೊಂಡಿದ್ದಾರೆ. ಆದರೆ ಕಂಪನಿಯು ಸೂಕ್ತ ಸಮಯಕ್ಕೆ ವೇತನ ನೀಡದೆ ವಿನಾಕಾರಣ ಕಾರ್ಮಿಕರಿಗೆ ತೊಂದರೆ ಕೊಡುತ್ತಿದ್ದಾರೆ. ಗುತ್ತಿಗೆ ಕಂಪನಿಯನ್ನು

ಕೇಳಿದರೆ ಬಿಸಿಡಿ ಅಪಾರ್ಟ್ಮೆಂಟ್‌ನವರು ನಮಗೆ ಸರಿಯಾದ ಸಮಯಕ್ಕೆ ಹಣ ನೀಡಿದ ಪರಿಣಾಮವಾಗಿ ಕಾರ್ಮಿಕರಿಗೆ ನಾವು ಸಂಬಳ ನೀಡಲಾಗುತ್ತಿಲ್ಲ ಎಂದು ಸಬೂಬು ಹೇಳುತ್ತಿದ್ದಾರೆ. ಇನ್ನು ಬಿಸಿಡಿ ಕಂಪನಿ ಅವರನ್ನ ಪ್ರಶ್ನೆ ಮಾಡಿದರೆ ಗುತ್ತಿಗೆದಾರರಿಗೆ ಸಕಾಲಕ್ಕೆ ವೇತನ ಪಾವತಿ ಮಾಡಿರುವುದಾಗಿ ಹೇಳುತ್ತಾರೆ. ಈಗ ನಾವು ಪ್ರತಿಭಟನೆ ಮಾಡಿದ ನಂತರ ಒಂದೆರಡು ದಿನದಲ್ಲಿ ಕಾರ್ಮಿಕರ ಎಲ್ಲಾ ವೇತನ ಚುಕ್ತಾ ಮಾಡುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಇಎಸ್‌ಐ, ಪಿಎಫ್ ಇಲ್ಲ; ಇಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಯಾವುದೇ ರೀತಿಯ ಇಎಸ್‌ಐ ಹಾಗೂ ಪಿಎಫ್ ನೀಡದೇ ಕಾರ್ಮಿಕರಿಗೆ ಗುತ್ತಿಗೆ ಕಂಪನಿಯು ಮೋಸ ಮಾಡಿದೆ. ಅಲ್ಲದೆ ಕೆಲಸ ಮಾಡುವ ಸಂದರ್ಭದಲ್ಲಿ ಸುರಕ್ಷತೆಗೆ ಬೇಕಾದ ಯಾವುದೇ ರೀತಿಯ ಪರಿಕರಗಳನ್ನು ಮಹಿಳೆಯರಿಗೆ ಕೊಟ್ಟಿಲ್ಲ ಎಂದು ಶಿವಕುಮಾರ್ ಚಕ್ರವರ್ತಿ ಆಕ್ರೋಶ ವ್ಯಕ್ತಪಡಿಸಿದರು.

ಭಾರತೀಯ ಅಂಬೇಡ್ಕರ್ ಸೇನೆ ಯುವ ಘಟಕ ರಾಜ್ಯಾಧ್ಯಕ್ಷ ಕೆಎಂ ನಾಗರಾಜ್, ರಾಜ್ಯ ಸಂಘಟನಾ ಕಾರ್ಯದರ್ಶಿ ನರಸಿಂಹಮೂರ್ತಿ, ಜಿಲ್ಲಾಧ್ಯಕ್ಷ ಮನೋಜ್ ಕುಮಾರ್ ಹಾಜರಿದ್ದರು.

**ಕಾರ್ಮಿಕ ಇಲಾಖೆ ಅಧಿಕಾರಿ ಭೇಟಿ**

ಕಾರ್ಮಿಕರಿಗೆ ಸಮರ್ಪಕ ವೇತನ ನೀಡದ ಹಿನ್ನೆಲೆ ಪ್ರತಿಭಟನಾ ಸ್ಥಳವಾದ ಬಿಸಿಡಿ ಅಪಾರ್ಟ್‌ಮೆಂಟ್ ಬಳಿಗೆ ಹೊಸಕೋಟೆ ತಾಲೂಕು ಕಾರ್ಮಿಕ ಇಲಾಖೆ ಅಧಿಕಾರಿ ಯತೀಶ್ ಸ್ಥಳಕ್ಕೆ ಭೇಟಿ ನೀಡಿ ಕಾರ್ಮಿಕರ ಸಮಸ್ಯೆ ಆಲಿಸಿದರು. ಈ ವೇಳೆ ಹೊರಗುತ್ತಿಗೆ ಕಂಪನಿಯವರಿಗೆ ದೂರವಾಣಿ ಕರೆ ಮಾಡಿದಾಗ ಕರೆ ಸ್ವೀಕರಿಸಿದ ಹಿನ್ನೆಲೆ ಕಂಪನಿ ಕಾರ್ಮಿಕರ ಮೇಲ್ವಿಚಾರಕನ ಮೂಲಕ ನೋಟಿಸ್ ರವಾನಿಸಿದ್ದು, ಸೂಕ್ತ ಮಾಹಿತಿ ಪಡೆದು ಅಗತ್ಯವಾದ ದಾಖಲೆಗಳೊಂದಿಗೆ ಕಾರ್ಮಿಕರನ್ನು ದಾಖಲು ಮಾಡಿಕೊಳ್ಳದೆ ವೇತನ ನೀಡದೆ ವಂಚಿಸಿದ್ದರೆ ಕ್ರಮ ಜರುಗಿಸುತ್ತೇವೆ ಎಂದು ತಿಳಿಸಿದರು.

## ಕೌಶಲ್ಯ ಅಭಿವೃದ್ಧಿ ತರಬೇತಿ

**ಉದಯಕಾಲ ನ್ಯೂಸ್, ಕನಕಪುರ:** ತಾಲೂಕಿನ ಶಿವನಹಳ್ಳಿ ವಲಯದ ಚೌಕಸಂದ್ರ ಕಾರ್ಯ ಕ್ಷೇತ್ರದ ಬೊಮ್ಮನಹಳ್ಳಿ ಗ್ರಾಮದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ತಾಲೂಕು ಯೋಜನಾಧಿಕಾರಿ ಸಂತೋಷ್.ಕೆ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ನಂತರ ಮಾತನಾಡಿದ ಅವರು, ಕೌಶಲ್ಯ ಅಭಿವೃದ್ಧಿ ತರಬೇತಿಯಲ್ಲಿ ಸೀರೆಗಳಿಗೆ ಕುಚ್ಚು ಹಾಕುವುದು ಕಲಿಯುವುದರಿಂದ ಮಹಿಳೆಯರು ಮನೆಯಲ್ಲಿಯೇ ಸಂಪಾದನೆ ಮಾಡುವುದರ ಬಗ್ಗೆ ಮತ್ತು ಅದರಲ್ಲಿ ಹೇಗೆ ತೊಡಗಿಸಿಕೊಳ್ಳುವುದು ಹಾಗೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಿವಿಧ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಕೌಶಲ್ಯ ತರಬೇತಿ ಶಿಕ್ಷಕರಾದ ಆಶಾ, ಕನಕ, ಮೇಲ್ವಿಚಾರಕಿ ಶ್ವೇತ ಸೇರಿದಂತೆ ಸೇವಾ ಪ್ರತಿನಿಧಿಗಳು ಹಾಗೂ ಸಂಘದ ಸದಸ್ಯರು ಉಪಸ್ಥಿತರಿದ್ದರು.

## ಗೊಬ್ಬರ ತಯಾರಿಕೆ ಉಚಿತ ತರಬೇತಿ

**ರಾಮನಗರ:** ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಹಸು ಸಾಕಾಣಿಕೆ (ಹೈನುಗಾರಿಕೆ) ಮತ್ತು ಎರೆಹುಳುಗೊಬ್ಬರ ಕುರಿತ 10 ದಿನಗಳ ಉಚಿತ ತರಬೇತಿಯು ಏಪ್ರಿಲ್ 16 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9241482541, 9740982585, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಜೆಟ್: ಪಟ್ಟಣದ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳು

**ಉದಯಕಾಲ ನ್ಯೂಸ್, ಮಾಗಡಿ:** ಪುರಸಭೆಯ 2025-26ನೇ ಸಾಲಿನ 57 ಲಕ್ಷ 98 ಸಾವಿರ ಉಳಿತಾಯ ಬಜೆಟ್ ಅನ್ನು ಪುರಸಭಾಧ್ಯಕ್ಷೆ ರಮ್ಯಾ ನರಸಿಂಹಮೂರ್ತಿ ಮಂಡಿಸಿದರು. ಪಟ್ಟಣದ ಪುರಸಭೆ ಆವರಣದಲ್ಲಿ ಬುಧವಾರ ಬಜೆಟ್ ಪುಸ್ತಕ ಬಿಡುಗಡೆ ಮಾಡಿ ಉಳಿತಾಯ ಬಜೆಟ್ ಗೆ ಅನುಮೋದನೆ ಸದಸ್ಯರಿಂದ ಪಡೆಯಲಾಯಿತು.

ಬೀಡಾಡಿ ನಾಯಿಗಳು, ಕೋತಿಗಳ ಹಾವಳಿ ತಡೆಯುವ ನಿಟ್ಟಿನಲ್ಲಿ- 20 ಲಕ್ಷ ಅನುದಾನ ಮೀಸಲಿಡಲಾಗಿದೆ. ಸ್ವಚ್ಛತೆ ಮಾಗಡಿ ಯೋಜನೆ ಅನುಷ್ಠಾನಕ್ಕಾಗಿ ಘನ ತ್ಯಾಜ್ಯ ವೈಜ್ಞಾನಿಕ ವಿಲೇವಾರಿಗಾಗಿ-2 ಕೋಟಿ 20 ಲಕ್ಷ ಅನುದಾನ, ಮಾಧ್ಯಮ ಪ್ರತಿನಿಧಿಗಳು ಪತ್ರಕರ್ತರಿಗೆ ವೈದ್ಯಕೀಯ ಸಹಾಯಕ್ಕಾಗಿ-6 ಲಕ್ಷ ರೂ., ಹೊಸದಾಗಿ ಕೊಳವೆಬಾವಿ ಮೋಟರ್ ಪಂಪು ಅಳವಡಿಕೆಗೆ-6 ಲಕ್ಷ ಹಣ, ಬೇಸಿಗೆಯಲ್ಲಿ ನೀರಿನ ಸಮಸ್ಯೆ ಆಗದಂತೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು-2 ಕೋಟಿ 20 ಲಕ್ಷ ಅನುದಾನ, ಉದ್ಯಾನವನ ಮತ್ತು ಕೈತೋಟ ದುರಸ್ತಿ ಮತ್ತು ನಿರ್ವಹಣಾ ವೆಚ್ಚ-55 ಲಕ್ಷ ಅನುದಾನ, ಹೈಬ್ರಿಡ್ ಸೋಲಾರ್ ವಿಂಟ್ ಪವರ್ ಯೋಜನೆ ಅನುಷ್ಠಾನಕ್ಕಾಗಿ-2 ಕೋಟಿ 75 ಲಕ್ಷ ಅನುದಾನ, ಮಳೆ ಹನಿ ಬೆಂಕಿ ಅನಾಹುತ ಪ್ರಕೃತಿ ವಿಕೋಪ ಹಾನಿಗೊಳಗಾದವರಿಗೆ ಪರಿಹಾರ ವಂತಿಕೆ ಒಂದು

ಕೋಟಿ ಹತ್ತು ಲಕ್ಷ ಅನುದಾನ ಮೀಸಲಿಟ್ಟಿದ್ದು, ಪಟ್ಟಣದ ಅಭಿವೃದ್ಧಿಗಾಗಿ ಪುರಸಭೆ ವಿವಿಧ ಯೋಜನೆಗಳನ್ನು ಹಾಕಿಕೊಂಡ